ಅತೀ ಜರೂರು

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/107/NTT Module/2022-23

ದಿನಾಂಕ: 22.11.2022

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಎಲ್ಲಾ ಬ್ಯಾಂಕ್ ಖಾತೆಗಳನ್ನು NTT ಮಾಡ್ಯೂಲ್‌ನಲ್ಲಿ ಅಳವಡಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 153 ಹೆಚ್‌ಪಿಸಿ 2022, ದಿನಾಂಕ:19.10.2022.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಹೆಚ್‌ಪಿಟಿ 2022 ದಿನಾಂಕ:14.07.2022.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (2)ರ ಸರ್ಕಾರದ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಡಿ ಬರುವ ಕಾಲೇಜುಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ವಿದ್ಯಾರ್ಥಿಗಳಿಂದ ಸಂಗ್ರಹಿಸುವ ಶುಲ್ಕವನ್ನು ಆಯಾ ಕಾಲೇಜುಗಳಲ್ಲಿಯೇ ಉಳಿಸಿಕೊಂಡು ಸಂಸ್ಥೆಗಳ ಅಭಿವೃದ್ಧಿಗಾಗಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಅನುಮೋದನೆಯೊಂದಿಗೆ ವೆಚ್ಚ ಮಾಡಲು ಅನುಮತಿ ನೀಡಿ ಆದೇಶಿಸಲಾಗಿದ್ದು, ಅದರನ್ವಯ ಸರ್ಕಾರಕ್ಕೆ ತೆರಿಗೆಯೇತರ ಆದಾಯವಾಗಿರುವ ಕಾಲೇಜುಗಳು ಸಂಗ್ರಹಿಸುವ ಶುಲ್ಕವನ್ನು ಪ್ರಾಂಶುಪಾಲರು ಸ್ವತ: ನಿರ್ವಹಿಸಲಿರುವುದರಿಂದ, ಕಾಲೇಜುಗಳ ಎಲ್ಲಾ ಬ್ಯಾಂಕ್ ಖಾತೆಗಳನ್ನು NTT ಮಾಡ್ಯೂಲ್‌ನಲ್ಲಿ ಅಳವಡಿಸಲು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 581 ವೆಚ್ಚ-8/2022 ದಿನಾಂಕ:17.08.2022 ರಲ್ಲಿ ನೀಡಿರುವ ಸಹಮತಿಯಂತೆ ಕ್ರಮವಹಿಸಲು ಉಲ್ಲೇಖಿತ(1)ರ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ತತ್ಸಂಬಂಧವಾಗಿ, ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಕಾಲೇಜಿನ ಎಲ್ಲಾ ಬ್ಯಾಂಕ್ ಖಾತೆಗಳನ್ನು **NTT** ಮಾಡ್ಯೂಲ್‌ನಲ್ಲಿ ತುರ್ತಾಗಿ ಅಳವಡಿಸಲು ಸೂಚಿಸಲಾಗಿರುತ್ತದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ: - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ..
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ. - *ತಮ್ಮ ಕಛೇರಿಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಎಲ್ಲಾ ಬ್ಯಾಂಕ್ ಖಾತೆಗಳನ್ನು NTT ಮಾಡ್ಯೂಲ್‌ನಲ್ಲಿ ಅಳವಡಿಸಿರುವ ಕುರಿತು ಮಾಹಿತಿಯನ್ನು ಕ್ರೋಢೀಕರಿಸಿ ಹಾರ್ಡ್ ಮತ್ತು ಸಾಫ್ಟ್ ಕಾಪಿಯನ್ನು ತುರ್ತಾಗಿ ಈ ಕಛೇರಿಯ ಈ-ಮೇಲ್ ವಿಳಾಸ dce.academic@gmail.com ಗೆ ದಿನಾಂಕ: 30.11.2022 ರೊಳಗೆ ಸಲ್ಲಿಸುವುದು.*
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
4) ಕಛೇರಿ ಪ್ರತಿ.